1. ಹರಾಜು ಬೈದಾದ ಕೂಡ್ಲೆ ಛಡಿ ಸವಾಲ್ ಮೊಬಲಗಿನಲ್ಲಿ ಕೇಕಡಾ 25 ರೂಪಾಯಿನಂತೆ ಆಗುವ ಮೊಬಲಗನ್ನು ಠೇವಣಿ ಇಡಬೇಕು. ಹಾಗಿಡದೆ ತಪ್ಪಿದರೆ ಕೂಡ್ಲೆ ದುಸರಾ ಹರಾಜು ಮಾಡಿಸಿ ಬರುವ ನಷ್ಟಕ್ಕೆ ಮೊದಲು ಛಡಿಸವಾಲ್‌ದಾರನ್ನು ಗುರಿಮಾಡಲ್ಪಡುತ್ತೆ.

2. ಹರಾಜು ತಾರೀಖು ಲಾಗಾಯಿತು 15 ದಿವಸದೊಳಗಾಗಿ ಬಾಕಿ ನಿಲ್ಲುವ ಮೊಬಲಗಂದರೆ ಛಡಿಸವಾಲ್ ಮೊಬಲಗ್ಗೆ ಭರ್ತಿಯಾಗಿ ಕೊಡತಕ್ಕ ಕೇಕಡಾ 75 ರೂಪಾಯಿನಂತೆ ಆಗುವ ಮೊಬಲಗನ್ನ ಛಡಿಸವಾಲ್‌ದಾರ ಹಾಜರಪಡಿಸಿ ರಸೀತಿ ಪಡಿಯಬೇಕು. ಇದಕ್ಕೆ ತಪ್ಪಿದರೆ ಠೇವಣಿ ಮೊಬಲಗನ್ನ ಸರ್ಕಾರಕ್ಕೆ ದಂಡವಾಗಿ ತೆಗದುಕೊಳ್ಳುವದಲ್ಲದೆ ಪುನಹ ಅಂಥಾ ಸೈಟನ್ನ ದುಸರಾ ಹರಾಜಿಗೆ ತಂದುಮಾಡಿ ಬರುವ ನಷ್ಟಕ್ಕೆ ಮೊದಲು ಛಡಿಸವಾಲ್‌ದಾರನ್ನ ಗುರಿಮಾಡಲ್ಪಡುತ್ತೆ.

3. ಹರಾಜು ಮಂಜೂರಾದ ಕೂಡ್ಲೆ ಸೈಟನ್ನೆ ಛಡಿಸವಾಲ್‌ದಾರನು ಸ್ವಾಧೀನಪಡಿಸಿಕೊಳ್ಳಬೇಕು.

4. ಕೊಟ್ಟ ತಾರೀಖಿನಾರಭ್ಯ 30 ದಿವಸದೊಳಗಾಗಿ ಕಟ್ಟಡದ ಕೆಲಸವನ್ನ ಪುರೂ ಮಾಡತಕ್ಕದ್ದು; ಮತ್ತು 6 ತಿಂಗಳೊಳಗಾಗಿ ಕಟ್ಟಡವನ್ನು ಪೂರೈಸತಕ್ಕದ್ದು.

5. 50 ಅಡಿ ಲಾಂಬಿಗೆ ಕಡಿಮೆ ಇಲ್ಲದಷ್ಟು ಜಾಗವನ್ನು ಮೇಲ್ ಚಾವಣಿ ಇಲ್ಲದೆ ಅಂಗಳಕ್ಕಾಗಿ ಅಥವಾ ಗಾಳಿ ಬರತಕ್ಕ ಪ್ರಕ್ಕಾಗಿ ಯಾವಾಗಲೂ ಬಿಟ್ಟಿರಬೇಕು. ಸದರೀ ಸ್ಥಳದಲ್ಲಿ ಹಂಗಾಮಿ, ಯಾ ತಾತ್ಕಾಯಂ ಕಟ್ಟಡ ಯಾವದನ್ನೂ ಕಟ್ಟಿಕೂಡದು.

6. ಕಟ್ಟಡದ ಪ್ಲಾನ್ ವಗೈರೆ ಸ್ಯಾನಿಟರಿ ಇಂಜನಿಯರವರಿಂದ ಮಂಜೂರಾಗುವ ವರಿಗೂ ಯಾವಕಟ್ಟಡವನ್ನೂ ಪ್ರಾರಂಭಿಸಕೂಡದು. ಮಾಳಿಗೆ ಮನೆಯನ್ನ ಕಟ್ಟಲೇಕೂಡದು. ಕಟ್ಟಡಗಳೆಲ್ಲಾ ಹೆಂಚಿನದಾಗಿಯಾಗಲಿ ಅಥವಾ ತಾರಸೀದಾಗಲಿ ಇರತಕ್ಕದ್ದು.

7. ನೆಲ ಮತ್ತು ಹಿತ್ತಲು ಮಟ್ಟವು ರೋಜೀನಾ ಪಾಕೀಜಾ ಬಗ್ಗೆ ಕಕ್ಕಸ ಕಟ್ಟತಕ್ಕ ಸ್ಥಳವು ಮತ್ತು ಮನೆ ಬಚ್ಚಲು ನೀರು ಹೋಗುವದಕ್ಕೆ ಕಟ್ಟತಕ್ಕ ಮೊಹರಿ ತರಹೆ ಮತ್ತು ಜಾಗೆ ಸಹ ಸ್ಯಾನಿಟರಿ ಇಂಜನಿಯರವರು ಅಪ್ಪಣೆ ಮಾಡಲು ರೀತಿಯಲ್ಲಿರತಕ್ಕದ್ದು.

8. ಬಂದು ಮತ್ತ, ಪಣ ಅಥವಾ ಜಾತಿಯನರಿಗೆ ವಿರ್ಪಡಿಸಿರುವ ಬೀದಿಯಲ್ಲಿನ ಮನೆಯಲ್ಲಿ ಸದರೀ ಬೀದಿಯ ಸಮಸ್ತ ಜನಗಳ ಬರಹ ಮೂಲಕವಾದ ಒಪ್ಪಿತದ ಮೇಲೆ ಡಿಪ್ಯುಟಿ ಕಮಿಷರ್ಡರವರು ಮಂಜೂರ್ಮಾಡಿದ ಹೊರ್ತು ಇತರ ಮತ್ತ, ಪಣ ಯಾ ಜಾತಿಯವರು ವಾಸಾ ಮಾಡಕೂಡದು.

9. ಕಟ್ಟಡಕ್ಕಾಗಿ ಕೊಟ್ಟರುವ ನಿವೇಶನಗಳಲ್ಲಿ ಹಳ್ಳ ತೆಗಿಯಕೂಡದು. ಕಟ್ಟಡಕ್ಕೋಸ್ಕರವಾಗಿ ಯಾ ನೆಲ ಮಟ್ಟವನ್ನು ಯತ್ಕಿಂಚಿತ್ತಾದರಕ್ಕಾಗಲಿ ಬೇಕಾಗುವ ಮಣ್ಣನ್ನ ಸ್ಯಾನಿಟರಿ ಇಂಜನಿಯರವರ ಅಪ್ಪಣೆ ಪ್ರಕಾರ ತೋರಿಸಲ್ಪಡುವ ಜಾಗಾದಲ್ಲಿ ತೆಗದುಕೊಳ್ಳತಕ್ಕದ್ದು.

10. ಮೇಲ್ಕಂಡ ಪರತ್ತುಗಳ ಪೈಕಿ ಯಾವದಕ್ಕಾದರು ತಪ್ಪು ನಡದಲ್ಲಿ ಕೊಡಲ್ಪಟ್ಟರುವ ನಿವೇಶನವನ್ನ ಹಿಂದುಳ್ಳೀದಾರನು ಮತ್ಯಾವ ವಿಚಾರಣೆಯೂ ಇಲ್ಲದೆ ಹೋಗಲಾಡಿಸಿಕೊಳ್ಳುವದಕ್ಕೆ ಗುರಿಯಾಗುವನು.

11. ಮೇಲ್ಕಂಡ ಪರತ್ತುಗಳ ಪೈಕಿ ಯಾವದಕ್ಕಾದರೂ ತಪ್ಪು ನಡೆದದ್ದಕ್ಕೋಸ್ಕರ ನಿವೇಶನವನ್ನ ಸರ್ಕಾರಕ್ಕೆ ಕೀರಿಸಿಕೊಂಡ ಬಳಿಕ ಹಿಂದುಳ್ಳೀದಾರನಾಗಲಿ ಅಥವಾ ಅವನಿಂದ ಪಡದುಕೊಂಡವರಾಗಲಿ ಯಾವ ವಿಧವಾದ ಪರಿಹರ ದ್ರವ್ಯಕ್ಕು ಯಾ ಸದರೀ ನಿವೇಶನದ ಮೇಲೆ ಖರ್ಚು ಮಾಡಿರುವ ಲಾಗವಡಿಗೂ ಹಕ್ಕು ದಾರ್ಯಾಗುವದಿಲ್ಲ.

ಎಂ. ಜಿ. ಕೃಷ್ಣಸ್ವಾಮಿರಾವ್,
ವೈಸ್ ಪ್ರೆಸಿಡೆಂಟ್.

ನೋಟಿಸ್.

ಸಿವಿಲ್ ಪ್ರೊಸಿಜ್ಯರ್ ಕೋಡು 30ನೆ ಸೆಕ್ಷನ್ ಮೇರೆ ಮೈಸೂರು ಅಡಿಷನಲ್ ಮುನಸೀಫ್ ಕೋರ್ಟ್‌ನಲ್ಲಿ.

1904—1905ನೆ ಇಸವಿ ಸಿವಿಲ್ ನಂಬರು 92.
1906—1907ನೆ ಇಸವಿ ಅಮಲ್‌ಜಾರಿ ನಂಬರು 513.

ವಾದಿ.
ನರಸಿಂಹರಂಗಾಚಾರ್.

ಪ್ರತಿವಾದಿಗಳು.
ಅಯ್ಯನಯ್ಯಂಗಾರ್ ವಗೈರೇರು.

ಇದರಿಂದ ಸಮಸ್ತ ವೃತ್ತಿವಂತರಿಗೂ ಮತ್ತು ಜನಗಳಿಗೂ ತಿಳಿಯಪಡಿಸುವದೇನೆಂದರೆ :—ಮೇಲ್ಕಂಡ ಸಿವಿಲ್ ನಂಬರಿನಲ್ಲಿ ಹೊಸೂರು-ಹಳಿಯೂರು ಗ್ರಾಮಗಳ ವಸೂಲಾತಿಗೋಸ್ಕರ, ಕೋರ್ಟಿನಿಂದ ಮೈಸೂರಲ್ಲಿರುವ ಅಡ್ವೋಕೇಟ್ ಮೆ|| ಎಸ್. ರಂಗಸ್ವಾಮೈಯ್ಯಂಗಾರ್‌ನ್ನು ರಿಸೀವರನ್ನಾಗಿ ಹೊಕರೂರು ಮಾಡಿ ಇರುವದು ಸರಿಯಷ್ಟೆ. ಸದರೀಯವರ ಬಾಬತು ಲೆಕ್ಕ್ತಗಳನ್ನು ತನಿಖೆ ಮಾಡುವದಕ್ಕೂ ಮೇಲ್ಕಂಡ ಗ್ರಾಮಗಳಲ್ಲಿ ವಸೂಲಾದ ಹೊಬಲಗಿನಲ್ಲಿ ಜಮಾಖರ್ಚು ಲೆಕ್ಕಾಚಾರ ಪ್ರಕಾರ ಜಾತಾ ಉಳಿದ ಮೊಬಲಗನ್ನು ವೃತ್ತಿವಂತರಿಗೆ ದಾವಾಷಾ ಮೇರೆ ಹಂಚಲು 1907ನೆ ಇಸವಿ ನವಂಬರು 3ನೆ ಭಾನುವಾರ ಹಿಯರಿಂಗ್ ಇಡಲ್ಪಟ್ಟಿರುತ್ತೆ. ಸದರೀ ಹಿಯರಿಂಗಿನ ದಿವಸ ದಿವಿ 12 ಘಂಟೆಗೆ ಸರಿಯಾಗಿ ಹಕ್ಕು ಬಾಧ್ಯತೆ ಇರತಕ್ಕ ಮೇಲ್ಕಂಡ ಗ್ರಾಮಗಳ ಎಲ್ಲಾ ವೃತ್ತಿವಂತರು ಆಗಲಿ ಯಾ ಅವರ ಕಡೆ ಲಾಯರೇ ಆಗಲಿ ಕೋರ್ಟು ರೂಬರೂಬು ಹಾಜರಾಗಿ ತಿಳಿಯಪಡಿಸತಕ್ಕದ್ದು.

(By order)
N. D. SESHANNA,
Head Munshi.